ಶ್ರೀ ಹಾರ್ನಳ್ಳಿ ರಾಮಸ್ವಾಮಿ : ಮಾನ್ಯ ಅಧ್ಯಕ್ಷರೇ, ಪ್ರಸ್ತಾವವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು :- ಪ್ರಸ್ತಾಪ ಏನೆಂದರೆ :

''ಕರ್ನಾಟಕ ವಿಧಾನಸಭೆಯ ನಿಯಮಗಳ ಸಮಿತಿಯು
ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು
ನಡವಳಿಕೆಯ ನಿಯಮಗಳಿಗೆ ತಿದ್ದುಪಡಿ ತರುವ ಬಗ್ಗೆ
ಮಂಡಿಸಿದ ವರದಿಯನ್ನು ಸಬೆ ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ವರದಿಗೆ ಒಪ್ಪಿಗೆ ನೀಡಲಾಯಿತು.

(2) ಕೂಡಲ ಸಂಗಮ ಅಭಿವೃದ್ದಿ ಮಂಡಳಿ ವಿಧೇಯಕ, 1994

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಧರ್ಮಸಿಂಗ್ :-(ಕಂದಾಯ ಮಂತ್ರಿ) ಮಾನ್ಯ : ಉಪಾಧ್ಯಕ್ಷರೇ, 1994 ರ ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪ ಮಂಡಿಸಲ್ಪಟ್ಟಿತು

ಉಪಾಧ್ಯಕ್ಷರು :- ಪ್ರಸ್ತಾಪ ಏನೆಂದರೆ, ''1994ರ ಕೂಡಲ ಸಂಗಮ ಅಭಿವೃದ್ದಿ ಮಂಡಳಿ ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 38ರವರೆಗೆ :-

ಉಪಾಧ್ಯಕ್ಷರು :- ''ಖಂಡ 2 ರಿಂದ 38ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 38ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ :-

ಉಪಾಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾಪನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾಪವನ್ನು ಅಂಗೀಕರಿಸಲ್ಪಟ್ಟಿತು

(ಮೊದಲನೆ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾಪದ ಅಂಗೀಕಾರ

ಶ್ರೀ ಧರ್ಮಸಿಂಗ್ (ಕಂದಾಯ ಸಚಿವರು) ಮಾನ್ಯ ಉಪಾಧ್ಯಕ್ಷರೇ, ''1994ರ ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.''

ಉಪಾಧ್ಯಕ್ಷರು :- ಪ್ರಸ್ತಾಪ ಏನೆಂದರೆ ''1994 ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

**ವಿಷಯ :- ನಗರಾಭಿವೃದ್ಧಿ ಇಲಾಖೆಯಲ್ಲಿ ನಡೆದಿರತಕ್ಕ ಅವ್ಯವಹಾರಗಳ ಬಗ್ಗೆ**

ಶ್ರೀ ಸಿ.ಬೈರೇಗೌಡ (ವೇಮಗಲ್) :- ಮಾನ್ಯ ಉಪಾಧ್ಯಕ್ಷರೆ, ಇವತ್ತು ಬೆಳಗ್ಗೆ ನಾನು ಪೂರಕ ಬೇಡಿಕೆಗಳ ಮೇಲೆ ಚರ್ಚೆಯಾಗುವ ಸಂದರ್ಭದಲ್ಲಿ ನಗರಾಭಿವೃದ್ಧಿ ಇಲಾಖೆಯಲ್ಲಿ ನಡೆದಿರತಕ್ಕ ಅವ್ಯವಹಾರದ ಬಗ್ಗೆ ಸರ್ಕಾರದ ಗಮನ ಸೆಳೆದಿದ್ದೆ. ಮತ್ತು ಇದಕ್ಕೆ ಸಂಬಂಧಪಟ್ಟ ಪತ್ರವನ್ನು ಕೂಡ ಅಧಿಕೃತವಾದಂಥ ದಾಖಲೆಗಳನ್ನು ಕೂಡ ಮಾನ್ಯ ಮಂತ್ರಿಗಳಿಗೆ ಕಳುಹಿಸಿದ್ದೆ. ಆಗ ಮುಖ್ಯಮಂತ್ರಿಗಳು ಇರಲಿಲ್ಲ. ನಿಮಗೆ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ -2 ಆಗಿರತಕ್ಕ ಸುಧೀರ್‌ಕುಮಾರ್ ಅವರು ಜುಲೈ 13, 1994ರಲ್ಲಿ ಒಂದು ವಿವರವಾದ ಟಿಪ್ಪಣಿಯನ್ನು ಕಳುಹಿಸಿದ್ದಾರೆ. ಅದು ತಲೆಯ ಮೇಲೆ ಮಲ ಹೊರತಕ್ಕ ಪದ್ಧತಿ ಏನಿತ್ತು ಅದನ್ನು ನಿರ್ಮೂಲನ ಮಾಡುವುದಕ್ಕೆ ಫ್ಲಷ್ ಲೆಟ್ರಿನ್ಸ್ ಕಟ್ಟುವುದರಲ್ಲಿ ನಡೆದಿರುವ ಹಣ ದುರುಪಯೋಗದ ಬಗ್ಗೆ ಅದಕ್ಕೆ ಸುಮಾರು 27-28 ಕೋಟಿ ರೂಪಾಯಿ ಹಣ ಬಿಡುಗಡೆಯಾಗಿದೆ. ಅದರಲ್ಲಿ 20 ಕೋಟಿ ರೂಪಾಯಿ ಹಣ ದುರುಪಯೋಗವಾಗಿದೆ. ಅದರ ಬಗ್ಗೆ ಸ್ಪಷ್ಟವಾದಂಥ ಒಂದು ವರದಿಯನ್ನು ಗುರುತರವಾದ ಜವಾಬ್ದಾರಿ ಇರತಕ್ಕ ಅಧಿಕಾರಿ, ಅದೂ ಸರ್ಕಾರದ ಕಾರ್ಯದರ್ಶಿ-2 ಆಗಿರುವವರು ಕಳುಹಿಸಿದ್ದಾರೆ. ಇಲ್ಲಿಯವರೆಗೆ ವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು ಕೊಟ್ಟಂಥ ವರದಿ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಅವರಿಗೆ ಒಂದು ಅವಕಾಶ ಕೊಡಬೇಕೆಂದು ಹೇಳಿದರು.

**9.00 ಪಿ.ಎಂ**

ಶ್ರೀ ಎಂ.ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) ಆ ವರದಿ ಬಂದ ಕೂಡಲೇ ನಾವು ಆ ಬಗ್ಗೆ ಸಿಓಡಿಗೆ ತನಿಖೆಗೆ ಕಳುಹಿಸಿದ್ದೇವೆ. ಸಿಓಡಿ ಎನ್‌ಕ್ವೈರಿ ಬಗ್ಗೆ ಹೋಮ್ ಡಿಪಾರ್ಟ್‌ಮೆಂಟ್‌ಗೆ ಆರ್ಡರ್ ಕೂಡ ಮಾಡಿದ್ದೇವೆ.

ಶ್ರೀ ಸಿ ಬೈರೇಗೌಡ : ಇನ್ನೊಂದು ವಿಷಯದಲ್ಲಿ ಇಲಾಖೆಯ ಮುಖ್ಯಸ್ಥರಾಗಿರತಕ್ಕವರು. ಅವರ ಮೇಲೆ ಕೂಡ ಒಂದು ಪ್ಯಾರಾವನ್ನು ಓದುವುದಕ್ಕೆ ಅಪೇಕ್ಷೆ ಪಡುತ್ತೇನೆ. ಈ ಸಭೆಯ ಹೆಚ್ಚಿನ ವೇಳೆ ನಾನು ಪಡೆಯಲು ಇಚ್ಛೆಪಡುವುದಿಲ್ಲ.